ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE :

# ಎಸ್‌ಎಸ್‌ಎಲ್‌ಸಿ ಪರೀಕ್ಷೆ ಪ್ರಶ್ನಿಸಿ ಸುಪ್ರೀಂಗೆ ಎಸ್‌ಎಲ್‌ಪಿ

**ಬೆಂಗಳೂರು:** ಕರೊನಾ ಸೋಂಕು ವ್ಯಾಪಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳನ್ನು ನಡೆಸದಂತೆ ಸರ್ಕಾರಕ್ಕೆ ನಿರ್ದೇಶಿಸಬೇಕೆಂದು ಕೋರಿ ಸುಪ್ರೀಕೋರ್ಟ್‌ಗೆ ವಿಶೇಷ ಮೇಲ್ಮನವಿ ಸಲ್ಲಿಕೆಯಾಗಿದೆ.

ಬೆಳಗಾವಿ ನಿವಾಸಿ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆ ಮುಖ್ಯಸ್ಥೆ ರಾಜಶ್ರೀ ನಾಗರಾಜ್ ಅರ್ಜಿ ಸಲ್ಲಿಸಿದ್ದು, ಸರ್ಕಾರದ ಈ ನಿರ್ಧಾರ ವಿದ್ಯಾರ್ಥಿಗಳು, ಪಾಲಕರು ಮತ್ತು ಶಿಕ್ಷಕರ ಜೀವವನ್ನು ಅಪಾಯಕ್ಕೆ ಸಿಲುಕಿಸಿದೆ ಎಂದು ಆರೋಪಿಸಿದ್ದಾರೆ.

ಪರೀಕ್ಷೆಗಳನ್ನು ರದ್ದುಪಡಿಸಲು ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ಸಲ್ಲಿಸಿದ್ದ ಪಿಐಎಲ್ ಅನ್ನು ಮೇ 27ರಂದು ಇತ್ಯರ್ಥಪಡಿಸಿರುವ ಹೈಕೋರ್ಟ್, ಸುರಕ್ಷತಾ ಮಾರ್ಗಸೂಚಿಗಳನ್ನು ಪಾಲಿಸಿಕೊಂಡು ಪರೀಕ್ಷೆ ನಡೆಸಲು ಅನುಮತಿ ನೀಡಿದೆ. ಹೈಕೋರ್ಟ್ ಆದೇಶ ರದ್ದುಪಡಿಸಿ, ಪರೀಕ್ಷೆಗಳನ್ನು ನಡೆಸದಂತೆ ರಾಜ್ಯ ಸರ್ಕಾರ ಮತ್ತು ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಗೆ ನಿರ್ದೇಶಿಸಬೇಕು. ವಿದ್ಯಾರ್ಥಿಗಳ ಆಂತರಿಕ ಮೌಲ್ಯಮಾಪನ ಮತ್ತು ಪೂರ್ವಭಾವಿ ಪರೀಕ್ಷಾ ಫಲಿತಾಂಶಗಳನ್ನೇ ಪರಿಗಣಿಸಿ ಅಂತಿಮ ಫಲಿತಾಂಶ ಪ್ರಕಟಿಸಲು ಆದೇಶಿಸಬೇಕು ಎಂದು ಅರ್ಜಿದಾರರು ಮನವಿ ಮಾಡಿದ್ದಾರೆ.

**ಅರ್ಜಿದಾರರ ಆಕ್ಷೇಪವೇನು?:** ರಾಜ್ಯದಲ್ಲಿ ಜೂ. 25ರಿಂದ



ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳನ್ನು ನಡೆಸಲು ಉದ್ದೇಶಿಸಲಾಗಿದ್ದು, 8.48 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಲಿದ್ದಾರೆ. ರಾಜ್ಯಾದ್ಯಂತ 2,789 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ವಿದ್ಯಾರ್ಥಿಗಳ ಜತೆ ಅವರ ಪಾಲಕರೂ ಪ್ರಯಾಣಿಸುವ ಸಾಧ್ಯತೆಯಿದ್ದು, ಪರೀಕ್ಷಾ ಕೇಂದ್ರಗಳಲ್ಲಿ ಜನ ದಟ್ಟಣೆ ಉಂಟಾಗುತ್ತದೆ. ಈ ವೇಳೆ ಎಷ್ಟೇ ಸುರಕ್ಷತಾ ಕ್ರಮಗಳನ್ನು ಅನುಸರಿಸಿದರೂ ಸೋಂಕು ಹರಡುವ ಅಪಾಯವಿರುತ್ತದೆ. ಅಪ್ರಾಪ್ತ ವಿದ್ಯಾರ್ಥಿಗಳ ಜೀವವನ್ನು ಅಪಾಯಕ್ಕೆ ದೂಡುವ ಜತೆಗೆ ಅವರ ಬದುಕುವ ಹಕ್ಕನ್ನು ಕಸಿದುಕೊಂಡಂತಾಗುತ್ತದೆ ಎಂದು ಅರ್ಜಿದಾರರು ಆಕ್ಷೇಪಿಸಿದ್ದಾರೆ.